ಕರ್ನಾಟಕ ವಿಧಾನ ಸಭೆ

ಶುಕ್ರವಾರ 23ನೇ ಮಾರ್ಚ್ 2001ರಂದು ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಗ್ಗೆ 11-00 ಗಂಟೆ 10 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರು : ಶ್ರೀ ಎಂ.ವಿ.ವೆಂಕಟಪ್ಪರವರು ಪೀಠವನ್ನು ಅಲಂಕರಿಸಿದ್ದರು.

1. ವರದಿಗಳನ್ನೊಪ್ಪಿಸುವುದು

ಶ್ರೀ ವಿ.ಕೃಷ್ಣಪ್ಪ (ದೊಡ್ಡಬಳ್ಳಾಪುರ): ಮಾನ್ಯ ಅಧ್ಯಕ್ಷರೆ, ವಿಧಾನ ಸಭೆಯ ಸದಸ್ಯರುಗಳ ಖಾಸಗಿ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಯ ಅಧ್ಯಕ್ಷರಾದ ಉಪ ಸಭಾಧ್ಯಕ್ಷರ ಪರವಾಗಿ ವಿಧಾನ ಸಭೆಯ ಸದಸ್ಯರುಗಳ ಖಾಸಗಿ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಯ ಏಳನೇ ವರದಿಯನ್ನು ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ(ಅಂಕೋಲ): ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಅಧ್ಯಕ್ಷರ ಪರವಾಗಿ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಮೂರನೇ, ನಾಲ್ಕನೇ ಹಾಗೂ ಐದನೇ ವರದಿಗಳನ್ನು ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು: ವರದಿಗಳನ್ನು ಒಪ್ಪಿಸಲಾಯಿತು.

ಅಧ್ಯಕ್ಷರು: ಇವತ್ತು ಪ್ರಶ್ನೋತ್ತರ ಮತ್ತು ಶೂನ್ಯ ವೇಳೆ ಇರುವುದಿಲ್ಲ. ಮಾನ್ಯ ಸದಸ್ಯರುಗಳು ದಯಮಾಡಿ ಸಹಕರಿಸಬೇಕು. ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯನ್ನು ಮಧ್ಯಾಹ್ನ 2.30ರವರೆಗೆ ನಡೆಸಲಾಗುತ್ತದೆ. ಸದರಿ ಚರ್ಚೆಗೆ ನಂತರ ಮಾನ್ಯ ಮುಖ್ಯಮಂತ್ರಿಗಳು ಉತ್ತರ ನೀಡುತ್ತಾರೆ. ಬಹುಶಃ 4 ಗಂಟೆ ವೇಳೆಗೆ ಸದನ ಮುಗಿಯಬಹುದು. ದಯವಿಟ್ಟು ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡುವ ಸದಸ್ಯರುಗಳು ಸಂಕ್ಷಿಪ್ತವಾಗಿ ಮಾತನಾಡಬೇಕೆಂದು ಕೋರುತ್ತೇನೆ. ಅಕಸ್ಮಾತ್ ಸಮಯದ ಅಭಾವದಿಂದ ಇಂದು ಯಾರಾದರೂ ಸದಸ್ಯರುಗಳಿಗೆ ಮಾತನಾಡಲು ಅವಕಾಶ ಸಿಗದಿದ್ದಲ್ಲಿ ಅಂತಹವರುಗಳಿಗೆ ಬಜೆಟ್ ಭಾಷಣದ ಮೇಲಿನ ಚರ್ಚೆಯಲ್ಲಿ ಪಾಲ್ಗೊಳ್ಳಲು ಅವಕಾಶ ನೀಡುತ್ತೇನೆಂದು ನಾನು ಭರವಸೆ ನೀಡುತ್ತೇನೆ. ಇಂದು ಲಂಚ್ ಅವರ್ ಇರುವುದಿಲ್ಲ. ನಿರಂತರವಾಗಿ ಚರ್ಚೆ ನಡೆಯಲಿದೆ. ಮಂಗಳವಾರ ಶೂನ್ಯ ವೇಳೆ ಕಲಾಪಕ್ಕೆ ಅವಕಾಶ ಮಾಡಿಕೊಡುತ್ತೇನೆ. ಈಗ ಮೊದಲು ಮಾನ್ಯ